**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ:** 1059/2021 **CW**4 **PW**-4

**ಸಾಕ್ಷಿಯನ್ನು ದಿಃ** 09.07.2026 **ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕುಮಾರ್ |
| ತಂದೆಯ ಹೆಸರುಃ | ನಂಜುಂಡೇಗೌಡ |
| ವಯಸ್ಸುಃ | 55 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ಸಾಸಲುಪುರ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಸ್ಥಳ ಮತ್ತು ಅಮಾನತ್ತು ಮಹಜರ್ ಅನ್ನು ತೋರಿಸಲಾಗಿ, ಅದನ್ನು ಅವರು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

3 ವರ್ಷದ ಹಿಂದೆ ಚಾಸಾ-2 ರವರು ಸಹಿ ಮಾಡುವಂತೆ ತಿಳಿಸಿದ್ದರಿಂದ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮಜರುಗಿಸಿಲ್ಲ. ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಘಟನೆ ಬಗ್ಗೆ ಏನು ಗೊತ್ತಿಲ್ಲ. ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ದಿಃ 18.04.2021 ರಂದು ಮದ್ಯಾಹ್ನ 12.00 ರಿಂದ 1.00 ರ ಸಮಯದಲ್ಲಿ ಪೋಲೀಸರು ಘಟನಾ ಸ್ಥಳಕ್ಕೆ ಬಂದಿದ್ದು ಆ ಸಮಯದಲ್ಲಿ ಮಹಜರ್ ಕ್ರಮ ಜರುಗಿಸಿ ಮು ಮಾ-1 ನ್ನು ಅಮಾನತ್ತುಪಡಿಸಿಕೊಂಡು ನನ್ನಿಂದ ಮತ್ತು ಚಾಸಾ-1 ಮತ್ತು ಚಾಸಾ-5

ರವರಿಂದ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರಗಳು ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಕೆ ಎನ್ ಕೆ ರವರಿಂದ ಃ**

ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿದ್ದು, ಅನುಮತಿಸಲಾಯಿತು.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**